**ಕರ್ನಾಟಕ ಸರ್ಕಾರ**
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-52.

ಸಂ:BCWD-16012/33/2022-BCWD_TRAINING-BCWD(971849) ದಿನಾಂಕ:27-12-2022

# ಪ್ರಕಟಣೆ

2022-23ನೇ ಸಾಲಿಗೆ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಾದ IIM, IIT, IISc, IIITs, NITs, IISERs, AIIMS, NLU, ISM, IIP, ISI, JIPMER ಅಥವಾ SPA ಗಳಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದಿರುವ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ)ಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ಪ್ರೋತ್ಸಾಹಧನಕ್ಕಾಗಿ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು:30/01/2023, ಸಂಜೆ 5.00 ಗಂಟೆ.

## ಅರ್ಹತೆ ಮತ್ತು ಸೂಚನೆಗಳು:

1. 2022-23 ನೇ ಸಾಲಿನಲ್ಲಿ IIM, IIT, IISc, IIITs, NITs, IISERs, AIIMS, NLU, ISM, IIP, ISI, JIPMER, SPA ಒಟ್ಟು ಈ 13 ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳ ಪೈಕಿ ಯಾವುದಾದರೂ ಒಂದರಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದಿರಬೇಕು.
2. ಸದರಿ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪದವಿ, ಸ್ನಾತಕೋತ್ತರ ಪದವಿ ಅಥವಾ ಪೂರ್ಣಾವಧಿ ಪಿಹೆಚ್.ಡಿ ಗಾಗಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದು ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಮಾತ್ರ ಸದರಿ ಕಾರ್ಯಕ್ರಮದಡಿ ಸೌಲಭ್ಯ ಒದಗಿಸಲಾಗುವುದು.
3. ಈ ಮೇಲ್ಕಂಡ ಸಂಸ್ಥೆಗಳಲ್ಲಿ ಡಿಪ್ಲೋಮೊ, ಪಿಜಿ ಡಿಪ್ಲೋಮೊ ಹಾಗೂ ಇತರೆ ಸರ್ಟಿಫಿಕೇಟ್ ಕೋರ್ಸುಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಈ ಕಾರ್ಯಕ್ರಮದಡಿ ಪ್ರೋತ್ಸಾಹ ಧನ ಪಡೆಯಲು ಅವಕಾಶವಿರುವುದಿಲ್ಲ.
4. ಈ ಕೆಳಗಿನಂತೆ ವಿದ್ಯಾರ್ಥಿಗಳ ಹಿಂದಿನ ಶೈಕ್ಷಣಿಕ ವಿದ್ಯಾರ್ಹತೆಯ ಅಂಕಗಳು/ಗ್ರೇಡ್ ಅನ್ನು ಪರಿಗಣಿಸಲಾಗುವುದು.

| ಕ್ರ. ಸಂ | ಪ್ರೋತ್ಸಾಹಧನ ನೀಡುವ ಕೋರ್ಸ್ | ಆಯ್ಕೆಗೆ ಪರಿಗಣಿಸುವ ವಿದ್ಯಾರ್ಹತೆ |
|---|---|---|
| 1 | ಪದವಿ | ದ್ವಿತೀಯ ಪಿ.ಯು.ಸಿ/12ನೇ ತರಗತಿ ಅಂಕಗಳು/ಗ್ರೇಡ್ |
| 2. | ಸ್ನಾತಕೋತ್ತರ ಪದವಿ | ಪದವಿಯ ಎಲ್ಲಾ ವರ್ಷ/ಸೆಮಿಸ್ಟರ್‌ಗಳ ಸರಾಸರಿ ಅಂಕಗಳು/ ಗ್ರೇಡ್ |
| 3. | ಪೂರ್ಣಾವಧಿ ಪಿಹೆಚ್.ಡಿ | ಸ್ನಾತಕೋತ್ತರ ಪದವಿಯ ಎಲ್ಲಾ ವರ್ಷ/ಸೆಮಿಸ್ಟರ್‌ಗಳ ಸರಾಸರಿ ಅಂಕಗಳು/ ಗ್ರೇಡ್ |

5. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ನೀಡುವ ರೂ.2.00 ಲಕ್ಷಗಳ ಪ್ರೋತ್ಸಾಹಧನವನ್ನು ವಿದ್ಯಾರ್ಥಿಯು ಜೀವನದಲ್ಲಿ ಒಂದು ಬಾರಿ ಮಾತ್ರ ಪಡೆಯಲು ಅರ್ಹರಿರುತ್ತಾರೆ.
6. ಜಾತಿ ಮತ್ತು ಆದಾಯ ಮಿತಿ – ವಿದ್ಯಾರ್ಥಿಯು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಅಥವಾ 3ಬಿ ಗೆ ಸೇರಿದವರಾಗಿರಬೇಕು ಹಾಗೂ ವಿದ್ಯಾರ್ಥಿಯ ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ.6.00 ಲಕ್ಷಗಳಿಗೆ ಮೀರಿರಬಾರದು.

ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್-ಸೈಟ್ https://bcwd.karnataka.gov.in ಅನ್ನು ನೋಡಬಹುದು.
ಸಹಾಯವಾಣಿ ಸಂಖ್ಯೆ: 8050770004 (ಕಛೇರಿ ಕಾರ್ಯನಿರ್ವಹಿಸುವ ಸಮಯ ಬೆಳಗ್ಗೆ 10.00 ರಿಂದ ಸಂಜೆ 5.30 ರವರೆಗೆ ಸಾರ್ವಜನಿಕ ರಜಾ ದಿನಗಳನ್ನು ಹೊರತುಡಿಸಿ)

28/12

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.